**ಕರ್ನಾಟಕ ಸರ್ಕಾರ**
**ವಾಣಿಜ್ಯ ತೆರಿಗೆ ಇಲಾಖೆ**

**2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಅಡಿ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರ ನಡವಳಿಗಳು**

ವಿಷಯ: ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003–
'ಅರ್ಧ ಬೇಯಿಸಿದ ಚಪಾತಿಗಳ' ಮಾರಾಟದ
ಮೇಲೆ ಅನ್ವಯವಾಗುವ ತೆರಿಗೆ ದರದ ಬಗ್ಗೆ.

ಉಲ್ಲೇಖ: ಮೆ. ಬೆಸ್ಟ್ ಅಸೋಸಿಯೇಟ್ಸ್, ಬೆಂಗಳೂರು
ಇವರ ದಿನಾಂಕ 10–03–2014ರ ಅರ್ಜಿ.
(ಟಿನ್: 29201172632)

***

2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದಡಿಯಲ್ಲಿ ನೋಂದಣಿದಾರರಾದ ಮೆ. ಬೆಸ್ಟ್ ಅಸೋಸಿಯೇಟ್ಸ್, ನಂ.1/1, 2ನೇ ಅಡ್ಡ ರಸ್ತೆ, 1ನೇ ಮುಖ್ಯ ರಸ್ತೆ, ಮಾರುತಿನಗರ, ಮಡಿವಾಳ, ಬೆಂಗಳೂರು–560068 ಇವರು ಮೇಲ್ಕಂಡ ಅರ್ಜಿಯಲ್ಲಿ 'ಅರ್ಧ ಬೇಯಿಸಿದ ಚಪಾತಿಗಳ' ಮಾರಾಟದ ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣವನ್ನು ಕೋರಿರುತ್ತಾರೆ.

2. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಮೇರೆಗೆ ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ),ಬೆಂಗಳೂರು ಇವರು ತೆರಿಗೆಯ ನಿರ್ಧರಣೆ ಹಾಗೂ ರಾಜಸ್ವದ ಸಂಗ್ರಹಣೆ ಕಾರ್ಯದಲ್ಲಿ ಏಕರೂಪತೆಯನ್ನು ತರುವ ಉದ್ದೇಶಕ್ಕಾಗಿ, ಸದರಿ ಅಧಿನಿಯಮದಡಿಯಲ್ಲಿ ತೆರಿಗೆಗೆ ಒಳಪಡುವ ಸರಕುಗಳ ಸಂಬಂಧದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಸಂದಾಯ ಮಾಡತಕ್ಕ ತೆರಿಗೆ ದರವನ್ನು ಸ್ಪಷ್ಟಪಡಿಸುವುದು ಅವಶ್ಯವೆಂದು ಅಥವಾ ಯುಕ್ತವೆಂದು ಭಾವಿಸಿದರೆ ಹಾಗೆ ಮಾಡಲು ಅಧಿಕಾರ ಹೊಂದಿದ್ದಾರೆ.

ಅರ್ಜಿದಾರರು ಕೋರಿರುವ ಸ್ಪಷ್ಟೀಕರಣವು ಮೇಲೆ ನಮೂದಿಸಿದ ಉಪಬಂಧದ ವ್ಯಾಪ್ತಿಗೊಳಪಡುವುದರಿಂದ ತೆರಿಗೆ ದರದ ಬಗ್ಗೆ ಸ್ಪಷ್ಟಪಡಿಸುವುದು ಸದರಿ ಉಪಬಂಧದ ಉದ್ದೇಶ ಸಾಧನೆಗಾಗಿ ಅವಶ್ಯವೆಂದು ಮನವರಿಕೆಯಾಗಿದೆ.

3. ಈ ಹಿನ್ನೆಲೆಯಲ್ಲಿ ತೆರಿಗೆ ದರವನ್ನು ಈ ಕೆಳಕಂಡಂತೆ ಸ್ಪಷ್ಟಪಡಿಸಲಾಗಿದೆ.

**ಸ್ಪಷ್ಟೀಕರಣ ಆದೇಶ ಸಂಖ್ಯೆಸಿಎಲ್ಆರ್/ಸಿಆರ್. 185/13–14, ದಿ.08–04–2014**

'ಬೇಯಿಸಲು ಸಿದ್ಧವಿರುವ ಚಪಾತಿಗಳು' ದಿನಾಂಕ 31–07–2012ರ ಅಧಿಸೂಚನೆ ಸಂಖ್ಯೆ. ಎಫ್‌ಡಿ143 ಸಿಎಸ್ಎಲ್ 2012(VII) ರೊಡನೆ ಓದಿಕೊಂಡಂತೆ ದಿನಾಂಕ:31.03.2012ರ ಅಧಿಸೂಚನೆ ಸಂಖ್ಯೆ. ಎಫ್‌ಡಿ 57 ಸಿಎಸ್ಎಲ್ 2012(II) ರಂತೆ ದಿನಾಂಕ:01.08.2012ರಿಂದ ಶೇಕಡಾ 5.5ರಷ್ಟು ತೆರಿಗೆಗೊಳಪಡುತ್ತದೆಂದು ಸ್ಪಷ್ಟೀಕರಿಸಲಾಗಿದೆ.

(ಅಜಯ್ ಸೇಠ್)
ವಾಣಿಜ್ಯ ತೆರಿಗೆಗಳ ಆಯುಕ್ತರು,
(ಕರ್ನಾಟಕ), ಬೆಂಗಳೂರು.